02 October 2026 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

info.varthaman@gmail.com

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಎಲ್ಲರನ್ನೂ ನಂಬುವುದು ಸಾಧ್ಯವಿಲ್ಲ, ಹಾಗಂತ ಪ್ರತಿಯೊಬ್ಬರನ್ನು ಅಪನಂಬಿಕೆಯಿಂದ ನೋಡಿದರೆ ಜೀವಿಸುವುದು ಅಸಾಧ್ಯ!

-ಸ್ನೇಹಾ ಆನಂದ್

**ಶುಭಾಶಯಗಳು**

ವರ್ತಮಾನ ಪ್ರಾದೇಶಿಕ ದಿನಪತ್ರಿಕೆಯ ಸಮಸ್ತ ಓದುಗರಿಗೆ, ಜಾಹೀರಾತುದಾರರಿಗೆ ಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿಯ ಶುಭಾಶಯಗಳು.

**ಬಿಡುವು**

ಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ ನಿಮಿತ್ತ ಶುಕ್ರವಾರ ಕಚೇರಿಗೆ ರಜೆ ಇರುವುದರಿಂದ ಶನಿವಾರದ ಸಂಚಿಕೆ ಪ್ರಕಟವಾಗುವುದಿಲ್ಲ.

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 286 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# ಎಸ್‌ಐಆರ್: ವೋಟ್ ಚೋರಿ ಸಂಚು

## ರಾಜ್ಯದಲ್ಲಿ 50ರಿಂದ 60 ಲಕ್ಷ ಮತದಾರರ ಹೆಸರು ಅಳಿಸಲು ಯತ್ನ: ಸಿಎಂ ಡಿಕೆಶಿ ಆರೋಪ

**ಬೆಂಗಳೂರು:** ರಾಜ್ಯದಲ್ಲಿ ಮತದಾರರ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಡಿ ಹೆಚ್ಚಿನ ಮತದಾರರ ಹೆಸರುಗಳನ್ನು ಅಳಿಸಲು ಅರ್ಜಿಗಳನ್ನು ಸಲ್ಲಿಸುವ ಮೂಲಕ ಸಂಚು ನಡೆಸುತ್ತಿದ್ದಾರೆ. ಎಸ್‌ಐಆರ್‌ಪ್ರಕ್ರಿಯೆಯೇ ದೊಡ್ಡ ವಂಚನೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆರೋಪಿಸಿದರು.

ಬೆಂಗಳೂರಿನಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 50ರಿಂದ 60 ಲಕ್ಷ ಮತದಾರರ ಹೆಸರುಗಳನ್ನು ಅಳಿಸಲು ಬಿಜೆಪಿ ಮತ್ತು ಜೆಡಿಎಸ್‌ನಿಂದ ದೊಡ್ಡ ಸಂಚು ನಡೆಯುತ್ತಿದೆ. ಮತದಾರರನ್ನು ಪಟ್ಟಿಯಿಂದ ಹೊರಗಿಡಲು ಬಿಜೆಪಿ ದೊಡ್ಡ ಪ್ರಮಾಣದಲ್ಲಿ ಫಾರ್ಮ್–7ಗಳನ್ನು ಮುದ್ರಿಸಿದೆ. ಈ ವಿಚಾರ ತಮ್ಮ ಪಾಲಿಗೆ ಭಾವನಾತ್ಮಕವಾಗಿರುವುದರಿಂದಲೇ ತೀವ್ರವಾಗಿ ಪ್ರಸ್ತಾಪಿಸುತ್ತಿರುವುದಾಗಿ ಆತಂಕ ವ್ಯಕ್ತಪಡಿಸಿದರು.

ಮತದಾರರ ಪಟ್ಟಿಯಿಂದ ಅಲ್ಪಸಂಖ್ಯಾತರು, ದಲಿತರು ಮತ್ತು ಪರಿಶಿಷ್ಟ ಪಂಗಡದ ಮತದಾರರ ಹೆಸರುಗಳನ್ನು ಅಳಿಸುವ ಈ ಸಂಚಿನಲ್ಲಿ ಬಿಜೆಪಿ ನಾಯಕರು ಭಾಗಿಯಾಗಿದ್ದಾರೆಂದು ಕಿಡಿಕಾರಿದರು.

ಮತದಾರರ ಹೆಸರುಗಳನ್ನು ಅಳಿಸಲು 45 ಲಕ್ಷ ಅರ್ಜಿಗಳನ್ನು ಸಲ್ಲಿಸಲಾಗಿದೆ. ವಿಜಯಪುರದಲ್ಲೇ 14,000 ಮತದಾರರ ಹೆಸರುಗಳನ್ನು ಅಳಿಸಲು ಬಿಜೆಪಿ ನಾಯಕರು ಅರ್ಜಿ ಸಲ್ಲಿಸಿದ್ದಾರೆ. ಸೆಪ್ಟೆಂಬರ್ 22, 23 ಮತ್ತು 24ರಂದು ಫಾರ್ಮ್–7 ಅರ್ಜಿಗಳನ್ನು ದೊಡ್ಡ ಪ್ರಮಾಣದಲ್ಲಿ ಸಲ್ಲಿಸಲಾಗಿದೆ ಎಂದು ಸಿಎಂ ಆರೋಪಿಸಿದರು.

ಬೇರೆ ಮತದಾರರ ಹೆಸರುಗಳನ್ನು ಅಳಿಸಲು ಅವರ ಪರವಾಗಿ ಫಾರ್ಮ್–7 ಸಲ್ಲಿಸುತ್ತಿರುವವರು ಮತಗಟ್ಟೆ ಮಟ್ಟದ ಏಜೆಂಟ್‌ಗಳಲ್ಲ, ಬದಲಿಗೆ ಬಿಜೆಪಿ ಕಾರ್ಯಕರ್ತರು ಎಂದು ಅವರು ಆರೋಪಿಸಿದರು.



### ನಿಮ್ಮ ಮತ ರಕ್ಷಿಸಲು ವಿಫಲ

**ಬೆಂಗಳೂರು:** ನಿಮ್ಮ ಮುಖ್ಯಮಂತ್ರಿ ಹಾಗೂ ಸಾರ್ವಜನಿಕ ಸೇವಕನಾಗಿ ನಿಮ್ಮ ಮತಗಳನ್ನು ರಕ್ಷಿಸಲು ನಾನು ಪ್ರಯತ್ನಿಸುತ್ತಿದ್ದೇನೆ. ಆದರೆ ನಾನು ವಿಫಲನಾಗಿದ್ದೇನೆ ಎಂಬ ಭಾವನೆ ನನಗಿದೆ. ಇದನ್ನು ನಾನು ಒಪ್ಪಿಕೊಳ್ಳಲೇಬೇಕು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಎಸ್‌ಐಆರ್ ಪ್ರಕ್ರಿಯೆ ಬಗ್ಗೆ ಅವರು ವಿಡಿಯೋ ಹಂಚಿಕೊಂಡಿದ್ದಾರೆ. ವಿಡಿಯೋದಲ್ಲಿ ಎಸ್‌ಐಆರ್‌ನಿಂದ ದೇಶದಲ್ಲಿ ಬಹುದೊಡ್ಡ ಬದಲಾವಣೆ ಆಗುತ್ತಿರುವುದನ್ನು ಎಲ್ಲರೂ ಗಮನಿಸಿದ್ದೀರಿ. ಇಡೀ ದೇಶ ಎಸ್‌ಐಆರ್ ಪದ್ಧತಿ ನೋಡಿ ತಲ್ಲಣಗೊಂಡಿದೆ. ರಾಜ್ಯದಲ್ಲಿ 1 ಕೋಟಿ ಮತದಾರರ ಹೆಸರು ನೆಪದಲ್ಲಿ ಡಿಲೀಟ್ ಆಗಿದೆ ಎಂದು ಹೇಳಿದ್ದಾರೆ.

ಮತದಾರರು ಆರೋಪಿತ ಫಾರ್ಮ್–7 ಅರ್ಜಿಗಳ ವಿವರಗಳನ್ನು ತಮ್ಮ ಕಚೇರಿಗೆ ಒದಗಿಸುವಂತೆ ಪಕ್ಷದ ಪದಾಧಿಕಾರಿಗಳು ಮತ್ತು ಮತದಾರರಿಗೆ ಅವರು ಮನವಿ ಮಾಡಿದ್ದು, ಈ ವಿಚಾರವನ್ನು ಚುನಾವಣಾ ಆಯೋಗದ ಗಮನಕ್ಕೆ ತರಲು ಅನುಕೂಲವಾಗಲಿದೆ ಎಂದು ಹೇಳಿದರು.

### ಸಿಇಸಿಗೆ ತಿಳಿಯದೆ ನಡೆಯಲ್ಲ

ಕೇಂದ್ರ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಗಮನಕ್ಕೆ ಬಾರದೆ ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಮತದಾರರ ಹೆಸರುಗಳನ್ನು ಅಕ್ರಮವಾಗಿ ಅಳಿಸಲು ಸಾಧ್ಯವಿಲ್ಲ ಎಂದು ಸಿಎಂ ಡಿ.ಕೆ.ಶಿವಕುಮಾರ್ ಆತಂಕ ವ್ಯಕ್ತಪಡಿಸಿದರು.

ಮತಗಳ್ಳತನ ಮತ್ತು ಚುನಾವಣಾ ಅಕ್ರಮಕ್ಕೆ ಸಂಬಂಧಿಸಿದಂತೆ ಎಫ್‌ಐಆರ್ ದಾಖಲಿಸುವಂತೆ ಚುನಾವಣಾ ಆಯೋಗವನ್ನೂ ಒತ್ತಾಯಿಸಿದರು. ಈ ಕುರಿತು ತನಿಖೆಗೆ ಆದೇಶಿಸುವವರೆಗೆ ಮುಖ್ಯ ಚುನಾವಣಾಧಿಕಾರಿ ವಿ.ಅನ್ಬುಕುಮಾರ್ ಕಚೇರಿಯಲ್ಲೇ ಕುಳಿತುಕೊಳ್ಳುವುದಾಗಿ ಸಿಎಂ ಎಚ್ಚರಿಕೆ ನೀಡಿದರು.

ಮತದಾರರ ಹೆಸರುಗಳನ್ನು ಅಳಿಸಲು ವಿವಿಧ ಹೆಸರುಗಳಲ್ಲಿ ವ್ಯಕ್ತಿಗಳು ಹಲವು ಅರ್ಜಿಗಳನ್ನು ಸಲ್ಲಿಸಿರುವ ಅನೇಕ ಪ್ರಕರಣ ಬೆಳಕಿಗೆ ಬಂದಿವೆ. ವಿಶೇಷ ತೀವ್ರ ಪರಿಷ್ಕರಣೆ ಅಡಿಯಲ್ಲಿ ಅಲ್ಪಸಂಖ್ಯಾತರು, ದಲಿತರು ಮತ್ತು ಬುಡಕಟ್ಟು ಸಮುದಾಯಗಳನ್ನು ಗುರಿಯಾಗಿಸಲಾಗುತ್ತಿದೆ ಎಂದು ಡಿ.ಕೆ. ಶಿವಕುಮಾರ್ ಆರೋಪಿಸಿದರು.

ಈ ಬಗ್ಗೆ ತನಿಖೆಗೆ ಆದೇಶಿಸುವವರೆಗೆ ನಾನು ಮುಖ್ಯ ಚುನಾವಣಾಧಿಕಾರಿ ಕಚೇರಿಯಲ್ಲೇ ಕುಳಿತುಕೊಳ್ಳುತ್ತೇನೆ. ಸಚಿವ ಸಂಪುಟ ಸಭೆ ಇದ್ದರೂ ಅಲ್ಲಿಂದ ಮರಳಿ ಬರುವುದಿಲ್ಲ. ನಾನು ಅಲ್ಲೇ ಮಲಗಬೇಕಾಗಬಹುದು ಎಂದು ಮುಖ್ಯಮಂತ್ರಿ ಹೇಳಿದರು.

ಬೆಳಗಾವಿ, ಭಾಲ್ಕಿ, ಮೈಸೂರು ಸೇರಿದಂತೆ ಹಲವು ಕಡೆಗಳಲ್ಲಿ ಮತದಾರರ ಪಟ್ಟಿಯಿಂದ ಅಕ್ರಮವಾಗಿ ಹೆಸರುಗಳನ್ನು ಅಳಿಸುವುದಕ್ಕೆ

### 25 ಸಾವಿರ ಬರ ಪರಿಹಾರ ನೀಡಿದರೆ ನಿಯೋಗದಲ್ಲಿ ಭಾಗಿ



**ಬೆಂಗಳೂರು:** ರೈತರಿಗೆ 25 ಸಾವಿರ ರೂ. ಬರ ಪರಿಹಾರ ಕೊಟ್ಟರೆ ಮಾತ್ರ ಸರ್ವಪಕ್ಷ ನಿಯೋಗದಲ್ಲಿ ನಾವು ಭಾಗವಹಿಸುವುದಾಗಿ ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ತಿಳಿಸಿದರು.

ವಿಧಾನಸೌಧದಲ್ಲಿ ಮಾತಾಡಿದ ಅವರು, ಸರ್ಕಾರ ಶ್ವೇತ ಪತ್ರ ಬಿಡುಗಡೆ ಮಾಡಲು ತಯಾರಿಲ್ಲ. ಸರ್ಕಾರ ಸಮಯ ಕಳೆಯುವ ಕೆಲಸ ಮಾಡುತ್ತಿದೆ ಅಷ್ಟೇ. ಸಿಎಂ ರೈತರಿಗೆ 25 ಸಾವಿರ ರೂ. ಬರ ಪರಿಹಾರ ಕೊಡುತ್ತೇವೆ ಎಂದು ಘೋಷಣೆ ಮಾಡಿದರೆ ನಾವು ನಿಯೋಗದಲ್ಲಿ ಬರುತ್ತೇವೆ ಎಂದಿದ್ದಾರೆ.

ಕಸ್ತೂರಿ ರಂಗನ್ ವರದಿ ವಿಚಾರದಲ್ಲಿ ಸರ್ವಾನುಮತದಿಂದ ತೀರ್ಮಾನ ಆಗಿದೆ. ಹಾಗಾಗಿ ನಾವು ಕಸ್ತೂರಿ ರಂಗನ್ ವರದಿ ವಿಚಾರದಲ್ಲಿ ಮಾತ್ರ ನಿಯೋಗದಲ್ಲಿ ಬರುತ್ತೇವೆ ಅಂತ ಸ್ಪಷ್ಟಪಡಿಸಿದರು.

### ವಾಣಿಜ್ಯ ಸಿಲಿಂಡರ್ ಬೆಲೆ ಹೆಚ್ಚಳ

**ನವದೆಹಲಿ:** ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆಯಲ್ಲಿ ಗಣನೀಯ ಏರಿಕೆಯಾಗಿದೆ. ಅ.1ರಿಂದ ಜಾರಿಗೆ ಬರುವಂತೆ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆಯನ್ನು 62.50 ರೂ. ಹೆಚ್ಚಿಸಲಾಗಿದೆ.



ಹಬ್ಬದ ಸೀಸನ್‌ಗೂ ಮುನ್ನ ಗ್ರಾಹಕರಿಗೆ ಬೆಲೆ ಏರಿಕೆಯ ಬಿಸಿ ತಟ್ಟಲಿದೆ. ಇದರಿಂದ ಹೋಟೆಲ್‌ಗಳು, ರೆಸ್ಟೋರೆಂಟ್‌ಗಳ ಮೇಲೆ ಪರಿಣಾಮ ಬೀರುತ್ತದೆ. ದೆಹಲಿಯಲ್ಲಿ 19 ಕೆ.ಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆಯು 62.50 ರೂ.ಗಳಷ್ಟು ಏರಿಕೆಯಾಗಿ 2,810 ರೂ. ತಲುಪಿದೆ. ಸೆಪ್ಟೆಂಬರ್‌ನಲ್ಲಿ 2,747 ರೂ. ಇತ್ತು. ಗೃಹಬಳಕೆ ಸಿಲಿಂಡರ್ ದರದಲ್ಲಿ ಯಾವುದೇ ಬದಲಾವಣೆಯಾಗಿಲ್ಲ.

### ಬ್ಯಾಂಕ್ ಗಳಿಗೆ ಎಲ್ಲಾ ಶನಿವಾರ ರಜೆ




**ನವದೆಹಲಿ:** ಬ್ಯಾಂಕ್ ನೌಕರರ ಮುಷ್ಕರ ಬೆದರಿಕೆಗೆ ಮಣಿದಿರುವ ಕೇಂದ್ರ ಸರ್ಕಾರ ಪ್ರತಿ ಶನಿವಾರ ಬ್ಯಾಂಕ್‌ಗಳಿಗೆ ರಜೆ ಘೋಷಣೆ ಮಾಡಿ ಆದೇಶ ಹೊರಡಿಸಿದೆ.

ಕೇಂದ್ರ ಆರ್ಥಿಕ ಇಲಾಖೆ ಗೆಜೆಟ್ ನೋಟಿಫಿಕೇಶನ್ ಹೊರಡಿಸಿದೆ. ಇದೇ ತಿಂಗಳಿಂದ ಜಾರಿಗೆ ಬರುವಂತೆ ಪ್ರತಿ ಶನಿವಾರ ಬ್ಯಾಂಕ್‌ಗಳಿಗೆ ರಜೆ ಘೋಷಿಸಿದೆ. ಈ ಮೊದಲ ಬ್ಯಾಂಕ್‌ಗಳಿಗೆ ತಿಂಗಳ ಎರಡನೇ ಹಾಗೂ ನಾಲ್ಕನೇ ಶನಿವಾರ ಮಾತ್ರ ರಜೆ ಇತ್ತು. ಮೂರು ದಿನಗಳ ಬ್ಯಾಂಕ್ ಮುಷ್ಕರಕ್ಕೆ ಮುಂದಾಗಿದ್ದ ಬ್ಯಾಂಕ್ ಸಂಘಟನೆಗಳು ಕೊನೆ ಕ್ಷಣದಲ್ಲಿ ಮುಷ್ಕರ ಕೈಬಿಟ್ಟಿದ್ದವು.

### ಅಣ್ಣ, ಅತ್ತಿಗೆಗೆ ಅಕ್ರಮ ಹಣ: ಗ್ಯಾನೇಂದ್ರ ತಪ್ಪೊಪ್ಪಿಗೆ

**ಬೆಂಗಳೂರು:** ಕೆಪಿಎಸ್‌ಸಿ ಹಗರಣ ಪ್ರಕರಣದ ಪ್ರಮುಖ ಆರೋಪಿ, ಐಎಎಸ್ ಅಧಿಕಾರಿ ಗ್ಯಾನೇಂದ್ರ ಕುಮಾರ್ ಇಡಿ ಮುಂದೆ ತಪ್ಪೊಪ್ಪಿಗೆ ಮಾಡಿಕೊಂಡಿದ್ದಾರೆ. ಮಧ್ಯವರ್ತಿ ಬಸವರಾಜ ಕನ್ನಾಳೆ ಜೊತೆಗಿನ ಸ್ನೇಹ ಮತ್ತು ಹಣಕಾಸಿನ ವ್ಯವಹಾರದ ಮಾಹಿತಿ ಹೊರಹಾಕಿದ್ದಾರೆ.

ಜನವರಿ 8 ಮತ್ತು 9ರಂದು ಸಾಕಷ್ಟು ವಿಲ್ಲಾಗಳನ್ನು ಬುಕ್ ಮಾಡಲಾಗಿತ್ತು. ಆರ್ಕಿಡ್ ನಿರ್ವಾಣ ಸೇರಿದಂತೆ ಬೇರೆ ವಿಲ್ಲಾಗಳಲ್ಲಿ 20 ಅಭ್ಯರ್ಥಿಗಳು ಟ್ರೈನಿಂಗ್ ಪಡೆದಿದ್ದರು. ಕನ್ನಾಳೆ ಪ್ರಶ್ನೆ ಮತ್ತು ಉತ್ತರ ನೀಡಿದ್ದರು. ಎರಡೂ ಪ್ರಶ್ನೆ ಪತ್ರಿಕೆಯ 80 ಅಂಕದ ಪ್ರಶ್ನೆಗಳನ್ನು ಪೆನ್‌ಡ್ರೈವ್‌ನಲ್ಲಿ ಹಾಕಿ ಕೊಟ್ಟಿದ್ದೆ. ಅಂತಿಮ ಹಂತದ ಪ್ರಶ್ನೆಪತ್ರಿಕೆಯನ್ನೇ ನಾನು ನಕಲು ಮಾಡಿದ್ದೆ. ಕಚೇರಿಯಲ್ಲಿದ್ದ ಶಿಯೋಮಿ ಟ್ಯಾಬ್ಲೆಟ್ ಅಲ್ಲಿ ನಕಲು ಮಾಡಲಾಗಿತ್ತು. ಬಳಿಕ ಅದೇ ದಿನ ಟ್ಯಾಬ್ಲೆಟ್ ಅನ್ನು ಪುಡಿಪುಡಿ ಮಾಡಿ ಬಿಸಾಡಿರುವುದಾಗಿ ಅಧಿಕಾರಿ ಗ್ಯಾನೇಂದ್ರ ಇಡಿ ಮುಂದೆ ತಪ್ಪೊಪ್ಪಿಕೊಂಡಿದ್ದಾರೆ.

ಕೆಪಿಎಸ್‌ಸಿ ಹಗರಣದಲ್ಲಿ ತನಗೆ ಅಕ್ರಮವಾಗಿ ದೊರೆತ ಹಣದಲ್ಲಿ ಗ್ಯಾನೇಂದ್ರ ತನ್ನ ಅತ್ತಿಗೆಗೆ 15.39 ಲಕ್ಷ ಹಣ ನೀಡಿದ್ದಾರೆ. ಅಲ್ಲದೆ, ತನ್ನ ಸಹೋದರನ ಬ್ಯಾಂಕ್ ಅಕೌಂಟ್‌ಗೆ 10.94 ಲಕ್ಷ ಹಣ ಸಂದಾಯ ಮಾಡಿದ್ದಾರೆ. ಅಕ್ರಮದ ಹಣವನ್ನು ಸ್ವಂತ ಹಣವನ್ನಾಗಿ ಬಿಂಬಿಸಲು ಸಾಕಷ್ಟು ಪ್ರಯತ್ನ ಮಾಡಿದ್ದಾರೆ ಎಂಬುದು ವಿಚಾರಣೆಯಿಂದ ಬೆಳಕಿಗೆ ಬಂದಿದೆ.

ಅಧಿಕಾರಿಯ ಮನೆ ಮೇಲೆ ದಾಳಿ ನಡೆದಾಗ ಕೆಲ



ದಾಖಲಾತಿ ವಶಕ್ಕೆ ಪಡೆಯಲಾಗಿದೆ. ಇಬ್ಬರು ಪಶುವೈದ್ಯಾಧಿಕಾರಿ ಅಭ್ಯರ್ಥಿಗಳ ಹೆಸರು ಕೂಡ ಪಟ್ಟಿಯಲ್ಲಿದೆ. 1:3ರ ಅನುಪಾತದಲ್ಲಿ ಆಯ್ಕೆ ಪಟ್ಟಿ ಮಾಡಲಾಗಿದೆ. ಕೆಪಿಎಸ್‌ಸಿ ಇನ್ನಿತರ ಅಧಿಕಾರಿಗಳು ಭಾಗಿಯಾಗಿದ್ದಾರೆ. ಅಪರಾಧದಿಂದ ಬಂದ ಹಣವನ್ನು ಉಮೇಶ್ ಮತ್ತು ಓಂಕಾರ್‌ಗೆ ವರ್ಗಾಯಿಸಿದ್ದಾನೆ ಎಂಬುದು ಬೆಳಕಿಗೆ ಬಂದಿದೆ.

### ವಿನಯ್ ಕುಲಕರ್ಣಿಗೆ ಮತ್ತೆ ಸಂಕಷ್ಟ?

**ನವದೆಹಲಿ:** ಜಿಲ್ಲಾ ಪಂಚಾಯಿತಿ ಸದಸ್ಯ ಯೋಗೇಶ್ ಗೌಡ ಕೊಲೆ ಪ್ರಕರಣದಲ್ಲಿ ಶಾಸಕ ವಿನಯ್ ಕುಲಕರ್ಣಿಗೆ ಮತ್ತೆ ಸಂಕಷ್ಟ ಎದುರಾಗುವ ಸಾಧ್ಯತೆ ಇದೆ.

ವಿನಯ್ ಕುಲಕರ್ಣಿಗೆ ಜಾಮೀನು ನೀಡಿರುವುದಕ್ಕೆ ಸುಪ್ರೀಂ ಕೋರ್ಟ್ ಆಕ್ಷೇಪ ವ್ಯಕ್ತಪಡಿಸಿದೆ. ಕೊಲೆ ಕೇಸ್ ಹೊಂದಿರುವವರು ವಿಧಾನಸಭೆ ಪ್ರವೇಶಿಸಬೇಕೇ ಎಂದು ಖಾರವಾಗಿ ಪ್ರಶ್ನಿಸಿದೆ.

ಶಾಸಕ ವಿನಯ್ ಕುಲಕರ್ಣಿಗೆ ಹೈಕೋರ್ಟ್ ನೀಡಿದ್ದ ಜಾಮೀನು ಪ್ರಶ್ನಿಸಿ ರಾಜ್ಯ ಸರ್ಕಾರ ಹಾಗೂ ಯೋಗೇಶ್ ಗೌಡ ಸಹೋದರ ಗುರುನಾಥ್ ಗೌಡ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದರು. ಗುರುವಾರ ವಿಚಾರಣೆ ವೇಳೆ ಕೋರ್ಟ್ ಗಂಭೀರ ಪ್ರಶ್ನೆಗಳನ್ನು ಎತ್ತಿದೆ.

ನ್ಯಾಯಮೂರ್ತಿ ಪ್ರಶಾಂತ್ ಕುಮಾರ್ ಮಿಶ್ರಾ ನೇತೃತ್ವದ ದ್ವಿಸದಸ್ಯ ಪೀಠ ಪ್ರಕರಣದ ವಿಚಾರಣೆ ನಡೆಸಿತು. ವಿಚಾರಣೆ ಸಮಯದಲ್ಲಿ ವಿನಯ್ ಕುಲಕರ್ಣಿ ಪರ ವಕೀಲ ಅಭಿಷೇಕ್ ಮನುಸಿಂಘ್ವಿ ವಾದ ಮಂಡಿಸಿದರು. ಮೇಲ್ಮನವಿ ಅರ್ಜಿ ರದ್ದು ಮಾಡಬೇಕು ಎಂದು ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಪೀಠ, ಈ ರೀತಿಯ ಕೊಲೆಯಲ್ಲಿ ಭಾಗಿಯಾಗಿರುವವರು ವಿಧಾನಸಭೆಯಲ್ಲಿ ಇರಬೇಕೇ? ಇಂದು ಕೊಲೆಯಲ್ಲಿ ಭಾಗಿಯಾದವರು ನಾಳೆ ದರೋಡೆ



ಮಾಡಿದವರು ವಿಧಾನಸಭೆ ಪ್ರವೇಶಿಸುತ್ತಾರೆ. ಗಂಭೀರ ಸ್ವರೂಪದ ಆರೋಪಗಳನ್ನು ಎದುರಿಸುತ್ತಿರುವ ವ್ಯಕ್ತಿಗಳು ವಿಧಾನಸಭೆಯಲ್ಲಿ ಮುಂದುವರಿಯುವ ಅರ್ಹತೆ ಇದೆಯೇ ಎಂದು ಖಾರವಾಗಿ ಪ್ರಶ್ನಿಸಿದರು.

ಈ ವೇಳೆ ಮಧ್ಯಪ್ರವೇಶಿಸಿದ ರಾಜ್ಯ ಸರ್ಕಾರ ಮತ್ತು ಗುರುನಾಥ್ ಗೌಡ ಪರ ವಕೀಲರು, ಅರ್ಜಿ ವಜಾ ಮಾಡಬಾರದು. ವಿಚಾರಣೆ ನಡೆಸಬೇಕು. ನಮ್ಮ ವಾದ ಆಲಿಸಬೇಕು ಮತ್ತು ನಮ್ಮ ಪ್ರತಿಕ್ರಿಯೆ ಕೇಳಬೇಕು ಎಂದು ಮನವಿ ಮಾಡಿದರು. ಇದಕ್ಕೆ ಸ್ಪಂದಿಸಿದ ಕೋರ್ಟ್ ಕೌಂಟರ್ ಅಫಿಡವಿಟ್ ಫೈಲ್ ಮಾಡಲು ವಿನಯ್ ಕುಲಕರ್ಣಿ ಪರ ವಕೀಲರಿಗೆ ಸೂಚಿಸಿ ಅ.9ಕ್ಕೆ ವಿಚಾರಣೆ ಮುಂದೂಡಿತು.

### ಉರ್ದು ಭಾಷಾ ಹಬ್ಬ ಆಯೋಜಿಸಿಲ್ಲ: ಸ್ಪಷ್ಟನೆ

**ಬೆಂಗಳೂರು:** ವಿಧಾನಸೌಧದ ಮೆಟ್ಟಿಲುಗಳ ಮೇಲೆ ಉರ್ದು ಭಾಷಾ ಹಬ್ಬ ಆಯೋಜಿಸಲಾಗುತ್ತಿದೆ ಎಂಬ ವರದಿಯನ್ನು ಮುಖ್ಯಮಂತ್ರಿಗಳ ಸಚಿವಾಲಯ ಸ್ಪಷ್ಟವಾಗಿ ತಳ್ಳಿಹಾಕಿದೆ.



ವಿಧಾನಸೌಧದ ಮೆಟ್ಟಿಲುಗಳ ಮೇಲೆ ಯಾವುದೇ ಸರ್ಕಾರಿಯೇತರ ಅಥವಾ ಖಾಸಗಿ ಕಾರ್ಯಕ್ರಮಗಳಿಗೆ ಅವಕಾಶವಿಲ್ಲ ಎಂದು ಸಿಎಂ ಕಚೇರಿ ಪ್ರಕಟಣೆ ತಿಳಿಸಿದೆ. ಮಾಧ್ಯಮಗಳಲ್ಲಿ ಖಾಸಗಿ ಕಾರ್ಯಕ್ರಮ ನಡೆಯಲಿದೆ ಎಂದು ಬಿಂಬಿಸುತ್ತಿರುವುದು ಸತ್ಯಕ್ಕೆ ದೂರವಾದ ಮಾತು. ಸರ್ಕಾರ ಅಂತಹ ಯಾವುದೇ ಅನುಮತಿಯನ್ನು ನೀಡಿಲ್ಲ ಎಂದು ಮುಖ್ಯಮಂತ್ರಿಗಳ ಕಚೇರಿ ತಿಳಿಸಿದೆ. ವಿಧಾನಸೌಧದ ಮುಂಭಾಗದಲ್ಲೇ ಉರ್ದು ಹಬ್ಬ ಆಚರಿಸಲು ಮುಂದಾಗಿದೆ ಎಂಬ ಮಾತುಗಳು

### ಕೊಡಗು ಜಿಲ್ಲೆಯಲ್ಲಿ ಭಾರಿ ಮಳೆ

**ಮಡಿಕೇರಿ:** ಕೊಡಗು ಜಿಲ್ಲೆಯಲ್ಲಿ ಮತ್ತೆ ಮಳೆ ಆರ್ಭಟಿಸಿದೆ. ಮಡಿಕೇರಿ, ಕುಶಾಲನಗರ, ವಿರಾಜಪೇಟೆ, ಸುಂಟಿಕೊಪ್ಪ, ಮುರ್ನಾಡು ಸೇರಿದಂತೆ ಜಿಲ್ಲೆಯ ಹಲವು ಭಾಗಗಳಲ್ಲಿ ಗುರುವಾರ ಗುಡುಗು ಸಿಡಿಲಿನೊಂದಿಗೆ ಧಾರಾಕಾರ ಮಳೆಯಾಗಿದೆ.

ಕೂಡಿಗೆ ಸುತ್ತಮುತ್ತ ಭಾರೀ ಮಳೆಯಾಗಿದೆ. ಕೆಲಕಾಲ ಜನಜೀವನ ಅಸ್ತವ್ಯಸ್ತಗೊಂಡಿದೆ. ಕೆಲವೆಡೆ ವಾಹನ ಸಂಚಾರಕ್ಕೂ ಅಡಚಣೆ ಉಂಟಾಗಿದೆ.

ಮಳೆಯ ಅಬ್ಬರಕ್ಕೆ ಕೂಡಿಗೆ ವ್ಯಾಪ್ತಿಯಲ್ಲಿ ಹಲವು ಕಡೆ ಮರಗಳು ಧರೆಗೆ ಉರುಳಿವೆ. ಕೆಲವು ವಿದ್ಯುತ್ ಕಂಬಗಳಿಗೂ ಹಾನಿಯಾಗಿದೆ. ಕೆಲವೆಡೆ ವಿದ್ಯುತ್ ವ್ಯತ್ಯಯ ಉಂಟಾಗಿದೆ.

ವಿರಾಜಪೇಟೆ, ಮುರ್ನಾಡು, ಸುಂಟಿಕೊಪ್ಪ ಸೇರಿದಂತೆ ಜಿಲ್ಲೆಯ ಹಲವು ಭಾಗಗಳಲ್ಲಿ ಆಲಿಕಲ್ಲು ಸಹಿತ ಮಳೆಯಾಗಿದೆ. ಮಳೆಯ ಆಗ



ಮನ ರೈತಾಪಿ ವರ್ಗದಲ್ಲಿ ಸಂತಸ ಮೂಡಿಸಿದೆ. ಮಳೆ ಕೊರತೆಯಿಂದ ಸಂಕಷ್ಟದಲ್ಲಿದ್ದ ರೈತರಿಗೆ ಮಳೆ ಕೊಂಚ ನೆಮ್ಮದಿ ತಂದಿದೆ.

### ಪಡಿತರಚೀಟಿ ಇ–ಕೈವೈಸಿಗೆ ಹೊಸ ಆಪ್ ಬಿಡುಗಡೆ

**ಬೆಂಗಳೂರು:** ಸರ್ಕಾರ ಜನರಿಗೆ ಗುಡ್ ನ್ಯೂಸ್ ನೀಡಿದೆ. ಪಡಿತರ ಚೀಟಿಗೆ ಆನ್‌ಲೈನ್ ನಲ್ಲಿಯೇ ಇ–ಕೈವೈಸಿ ಮಾಡಲು ಹೊಸ ಆಪ್ ಬಿಡುಗಡೆ ಮಾಡಿದೆ.

ಸರ್ವರ್ ಸಮಸ್ಯೆಯಿಂದ ಇ–ಕೈವೈಸಿ ಮಾಡಲು ಗಂಟೆಗಟ್ಟಲೇ ಕ್ಯೂನಲ್ಲಿ ನಿಲ್ಲಬೇಕಾದ ಪರಿಸ್ಥಿತಿ ಎದುರಾಗಿದೆ. ಇದನ್ನು ತಪ್ಪಿಸಲು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಿಂದ ಆಪ್ ರಿಲೀಸ್ ಮಾಡಿದೆ. ಈ ಆಪ್‌ಗೆ ಅನ್ನಸೇವೆ ಎಂದು ಹೆಸರಿಡಲಾಗಿದೆ. ಎಂಟು ಜಿಲ್ಲೆಗೆ ಮಾತ್ರ ಲಾಂಚ್ ಮಾಡಲಾಗಿದೆ. ಈ ಆಪ್ ಮೂಲಕ




### ಅಕ್ರಮ ಮತದಾರರ ಹೆಸರು ಕೈಬಿಡಲಿ

#### ಮಸೀದಿಯಲ್ಲಿ ಕುಳಿತು ಅಕ್ರಮ ಸೇರ್ಪಡೆ: ಬಿ.ವೈ.ವಿಜಯೇಂದ್ರ

**ಕೋಲಾರ:** ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಆರಂಭವಾದಾಗ ಮಸೀದಿ, ಸಮುದಾಯ ಭವನಗಳಲ್ಲಿ ಅಕ್ರಮವಾಗಿ ಮತದಾರರ ಪಟ್ಟಿಗೆ ಹೆಸರು ಸೇರಿಸಲಾಗಿದೆ. ಕಾಂಗ್ರೆಸ್ ಸರ್ಕಾರ ಅಕ್ರಮವಾಗಿ ಸೇರಿಸಿರುವ ಹೆಸರು ಕೈಬಿಡಬೇಕು ಎಂದು ನಮ್ಮ ಕಾರ್ಯಕರ್ತರು ಚುನಾವಣಾ ಆಯೋಗಕ್ಕೆ ಅರ್ಜಿ ಸಲ್ಲಿಸಿದ್ದಾರೆ. ಇದರಲ್ಲಿ ತಪ್ಪೇನಿದೆ ಎಂದು ಬಿಜೆಪಿ ರಾಜ್ಯ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಪ್ರಶ್ನಿಸಿದರು.

ಬಂಗಾರಪೇಟೆಯಲ್ಲಿ ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಲವು ವಿಧಾನಸಭಾ ಕ್ಷೇತ್ರಗಳಲ್ಲಿ ನಡೆದಿರುವ ಅಕ್ರಮ ನಮಗೆ ಗೊತ್ತಿದೆ. ನಾವು ನೀಡಿದ ಅರ್ಜಿ ಸರಿಯಿಲ್ಲದಿದ್ದರೆ ಆಯೋಗ ತಿರಸ್ಕರಿಸುತ್ತದೆ. ಸರಿ ಇದ್ದರೆ ಒಪ್ಪಿಕೊಳ್ಳುತ್ತದೆ. ಇದರಲ್ಲಿ ರಾಜಕಾರಣ ಏನಿದೆ? ಎಂದು ಕೇಳಿದರು.



ಮಸೀದಿಗಳಲ್ಲಿ ಕುಳಿತು ಅಕ್ರಮವಾಗಿ ಹೆಸರು ಸೇರಿಸುವಾಗ, ಬಾಂಗ್ಲಾದೇಶಿಯರನ್ನು ಮತದಾರರ ಪಟ್ಟಿಗೆ ಸೇರಿಸುವಾಗ ಇವರ ಕಾಳಜಿ ಎಲ್ಲಿಗೆ ಹೋಗಿತ್ತು? ನಾವು ಮಾಡಿರುವುದು ಅಲ್ಪಸಂಖ್ಯಾತರ ಮತ ಅಳಿಸುವ ಕೆಲಸವಲ್ಲ. ಕಾಂಗ್ರೆಸ್ ನೇತೃತ್ವದಲ್ಲಿ ಅಕ್ರಮವಾಗಿ ಸೇರಿಸಲಾದ ಹೆಸರನ್ನು ತೆಗೆದುಹಾಕುವ ಪ್ರಯತ್ನವಷ್ಟೇ. ಕಾಂಗ್ರೆಸ್ ಬೆದರಿಕೆಗೆ ನಾವು ಹೆದರುವುದಿಲ್ಲ ಎಂದು ಹೇಳಿದರು.

ಹಣಕಾಸಿನ ಕೊರತೆಯಿಂದ ಯೋಜನೆ ಘೋಷಿಸಲು ಆಗದೆ ಜನರ ಗಮನ ಬೇರೆಡೆ ಸೆಳೆಯಲು ಗೊಂದಲ ಸೃಷ್ಟಿಸಲಾಗುತ್ತಿದೆ ಎಂದು ವಾಗ್ದಾಳಿ ನಡೆಸಿದರು.

ವಿಧಾನಸೌಧದ ಮೆಟ್ಟಿಲ ಮೇಲೆ ಉರ್ದು ಹಬ್ಬ ಆಚರಿಸುವ ರಾಜ್ಯ ಸರ್ಕಾರದ ನಿರ್ಧಾರವನ್ನು ಖಂಡಿಸಿದ ವಿಜಯೇಂದ್ರ, ಕೇಂದ್ರ ಸರ್ಕಾರ ತ್ರಿಭಾಷಾ ಸೂತ್ರ ತಂದಾಗ ಹಿಂದಿ ಹೇರಿಕೆ ಎಂದು ಮಕ್ಕಳಿಗೆ ವಂಚನೆ ಮಾಡಿದರು. ವಿಧಾನಸೌಧದಲ್ಲಿ ಪಾಕಿಸ್ತಾನ್ ಜಿಂದಾಬಾದ್ ಕೂಗಿದ ದೇಶದ್ರೋಹಿಗಳನ್ನು ರಕ್ಷಿಸಿದ ಸರ್ಕಾರ ಇದು. ಕಾಂಗ್ರೆಸ್ ಪಕ್ಷ ಒಡೆದು ಆಳುವ ನೀತಿ ಅನುಸರಿಸುತ್ತಿದೆ ಎಂದು ಆರೋಪಿಸಿದರು.

# ಆಯೋಗದ ಕಚೇರಿ ಮುಂದೆ ಸಿಎಂ ಡಿಕೆಶಿ, ಸಚಿವರ ಧರಣಿ

**ಬೆಂಗಳೂರು:** ರಾಜ್ಯದಲ್ಲಿ ಮತದಾರರ ಪಟ್ಟಿಯಿಂದ ಕಾನೂನು ಬಾಹಿರವಾಗಿ ಅರ್ಹರ ಹೆಸರು ಕೈಬಿಡಲಾಗುತ್ತಿದೆ ಎಂದು ಆರೋಪಿಸಿ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹಾಗೂ ಎಲ್ಲಾ ಸಚಿವರು ರಾಜ್ಯ ಮುಖ್ಯ ಚುನಾವಣಾಧಿಕಾರಿ ಕಚೇರಿಯಲ್ಲೇ ಗುರುವಾರ ಸಂಜೆ ಧರಣಿ ಆರಂಭಿಸಿದ್ದಾರೆ.

ನಕಲಿ ಫಾರ್ಮ್–7 ಸಲ್ಲಿಸಿ ಮತದಾರರ ಹೆಸರು ಡಿಲೀಟ್ ಮಾಡಲು ಯತ್ನಿಸಿದವರ ವಿರುದ್ಧ ತಕ್ಷಣವೇ ಎಫ್‌ಐಆರ್ ದಾಖಲಿಸುವಂತೆ ಒತ್ತಾಯಿಸಿ ಮುಖ್ಯಮಂತ್ರಿಗಳು ಕಚೇರಿ ಮೆಟ್ಟಿಲುಗಳ ಮೇಲೆ ಕುಳಿತು ಧರಣಿ ಆರಂಭಿಸಿರುವುದು ರಾಜ್ಯ ರಾಜಕೀಯದಲ್ಲಿ ತೀವ್ರ ಸಂಚಲನಕ್ಕೆ



ಕಾರಣವಾಗಿದೆ. ತೀವ್ರ ರಾಜಕೀಯ ಹೈಡ್ರಾಮಾ ಸೃಷ್ಟಿಯಾಗಿದೆ.

ಕಾಂಗ್ರೆಸ್ ನಾಯಕರು ಚುನಾವಣಾ ಆಯೋಗದ ಕಚೇರಿಗೆ

ಪುಟ 2ಕ್ಕೆ

### 3 ದಿನ ಅವಕಾಶ ಕೇಳಿದ ಮುಖ್ಯ ಚುನಾವಣಾಧಿಕಾರಿ

ಪ್ರಕರಣದ ತನಿಖೆ ನಡೆಸಿ ಕ್ರಮಕೈಗೊಳ್ಳಲು ಚುನಾವಣಾ ಆಯೋಗ 2ರಿಂದ 3 ದಿನಗಳ ಕಾಲಾವಕಾಶ ಕೇಳಿದೆ. ಆದರೆ ಇದನ್ನು ಸುತಾರಾಂ ಒಪ್ಪದ ಮುಖ್ಯಮಂತ್ರಿಗಳು ಎಫ್‌ಐಆರ್ ಮಾಡುವವರೆಗೆ ಕಚೇರಿ ಬಿಟ್ಟು ಕದಲುವುದಿಲ್ಲ. ಬೇಕಿದ್ದರೆ ರಾತ್ರಿಯಿಡೀ ಇಲ್ಲೇ ಇರುತ್ತೇವೆ. ದೆಹಲಿಗೆ ಫೋನ್ ಮಾಡುತ್ತೀರೋ ಅಥವಾ

ಪುಟ 2ಕ್ಕೆ